ಇ) ರಾಜ್ಯದ ಸಾಕ್ಷರತಾ ಪ್ರಮಾಣವನ್ನು ಹೆಚ್ಚಿಸಲು ಲೋಕ ಶಿಕ್ಷಣ ಇಲಾಖಾ ವತಿಯಿಂದ 15+ವಯೋಮಾನದ ಅನಕ್ಷರಸ್ಥರನ್ನು ಸಾಕ್ಷರಸ್ಥರನ್ನಾಗಿಸುವ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಪ್ರಸಕ್ತ ಸಾಲಿನಲ್ಲಿ

ಸಾಕ್ಷರ ಭಾರತ್ ಕಾರ್ಯಕ್ರಮ:

ರಾಜ್ಯದಲ್ಲಿ 2001 ರ ಜನಗಣತಿ ಪ್ರಕಾರ ಶೇ. 50 ಕ್ಕಿಂತ ಕಡಿಮೆ ಮಹಿಳಾ ಸಾಕ್ಷರತಾ ಪ್ರಮಾಣ ಇರುವ ರಾಜ್ಯದ ಗದಗ್, ಬೀದರ್, ಬಾಗಲಕೋಟೆ, ಕೊಪ್ಪಳ ಮಂಡ್ಯ, ಹಾವೇರಿ, ಬೆಳಗಾವಿ, ಚಿತ್ರದುರ್ಗ, ಬೆಂಗಳೂರು ಗ್ರಾ. ಬಳ್ಳಾರಿ, ಬಿಜಾಪುರ, ಕೋಲಾರ ಮೈಸೂರು, ರಾಯಚೂರು, ಚಾಮರಾಜನಗರ, ತುಮಕೂರು, ಗುಲ್ಬರ್ಗಾ ಮತ್ತು ಯಾದಗಿರ ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ.

ಈ ಕಾರ್ಯಕ್ರಮದಲ್ಲಿ 4091194 ಜನ 15+ ವಯೋಮಿತಿಯ ಅನಕ್ಷರಸ್ಥರನ್ನು ಸಾಕ್ಷರಸ್ಥರನ್ನಾಗಿಸಿ ದಿನಾಂಕ 31.03.2012 ರ ಅವಧಿಗೆ ರಾಜ್ಯದ ಸಾಕ್ಷರತಾ ಪ್ರಮಾಣವನ್ನು ಶೇ. 80–85 ಕ್ಕೆ ಹೆಚ್ಚಿಸುವ ಗುರಿ ಹೊಂದಿದೆ.

ಹಿಂದುಳಿದ ತಾಲ್ಲೂಕುಗಳಲ್ಲಿ ಸಾಕ್ಷರತಾ ಕಾರ್ಯಕ್ರಮ:

ಸಾಕ್ಷರ ಭಾರತ್ ಜಿಲ್ಲೆಗಳನ್ನು ಹೊರತುಪಡಿಸಿ ಡಾ॥ ಡಿ.ಎಂ. ನಂಜುಂಡಪ್ಪ ವರದಿಯನ್ವಯ ಹಾಸನ, ಶಿವಮೊಗ್ಗ, ಚಿಕ್ಕಮಗಳೂರು, ಧಾರವಾಡ, ದಾವಣಗೆರೆ, ಉತ್ತರ ಕನ್ನಡ ಜಿಲ್ಲೆಗಳ ಹಿಂದುಳಿದ 21 ತಾಲ್ಲೂಕುಗಳಲ್ಲಿ ಒಟ್ಟು 2550 ಕಲಿಕಾ ಕೇಂದ್ರಗಳ ಮೂಲಕ 25550 ಅನಕ್ಷರಸ್ಥರನ್ನು ಸಾಕ್ಷರಸ್ಥರನ್ನಾಗಿಸಲು ಸಾಕ್ಷರತಾ ಕಾರ್ಯಕ್ರಮ ಅನುಷ್ಠಾನಗೊಳಿಸಲಾಗುತ್ತಿದೆ.

ಮದ್ದೂರು ತಾಲ್ಲೂಕಿಗೆ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಕಾಮಗಾರಿ

90 (398) ಶ್ರೀಮತಿ ಕಲ್ಪನಾ ಸಿದ್ದರಾಜು (ಮದ್ದೂರು) :– ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ:–

ಅ) ಕಳೆದ ಮೂರು ವರ್ಷಗಳಲ್ಲಿ ಮದ್ದೂರು ತಾಲ್ಲೂಕಿಗೆ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ ಮಂಜೂರಾಗಿರುವ ಕಾಮಗಾರಿಗಳಾವುವು.

ಆ) ಈ ಕಾಮಗಾರಿಗಳಿಗೆ ಕಳೆದ ಮೂರು ವರ್ಷಗಳಲ್ಲಿ ಬಿಡುಗಡೆಯಾಗಿರುವ ಅನುದಾನದ ಮೊತ್ತವೆಷ್ಟು (ಕಾಮಗಾರಿವಾರು ವಿವರಗಳನ್ನು ನೀಡುವುದು);

ಇ) ಕಳೆದ ಮೂರು ವರ್ಷಗಳಲ್ಲಿ ಪ್ರಾರಂಭವಾದ ಕಾಮಗಾರಿಗಳಲ್ಲಿ ಪೂರ್ಣವಾಗಿರುವ ಹಾಗೂ ಅಪೂರ್ಣವಾಗಿರುವ ಕಾಮಗಾರಿಗಳು ಎಷ್ಟು ಮತ್ತು ಯಾವುವು (ವಿವರಗಳನ್ನು ನೀಡುವುದು);

ಈ) ಈ ಕಾಮಗಾರಿಗಳಿಗೆ ಮಂಜೂರಾಗಿದ್ದ ಅನುದಾನವು ಪೂರ್ಣವಾಗಿ ವಿನಿಯೋಗವಾಗಿದೆಯೆ;

ಉ) ಹಾಗಿಲ್ಲದಿದ್ದಲ್ಲಿ ವಿನಿಯೋಗವಾಗದೆ ಉಳಿಕೆಯಾಗಲು ಕಾರಣಗಳೇನು, ಉಳಿದಿರುವ ಅನುದಾನದ ಮೊತ್ತವೆಷ್ಟು (ಕಾಮಗಾರಿವಾರು ವಿವರ ನೀಡುವುದು) ?

ಶ್ರೀ ಜಗದೀಶ್ ಶೆಟ್ಟರ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು):–

ಅ) ಕಳೆದ ಮೂರು ವರ್ಷಗಳಲ್ಲಿ ಮದ್ದೂರು ತಾಲ್ಲೂಕಿಗೆ ಮಹಾತ್ಮಗಾಂದಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಮಂಜೂರಾದ ಕಾಮಗಾರಿಗಳ ವಿವರವನ್ನು ಈ ಕೆಳಗಿನಂತೆ ನೀಡಿದೆ.

ವರ್ಷ	ಮಂಜೂರಾದ ಕಾಮಗಾರಿಗಳ ಸಂಖ್ಯೆ
2008–09	30
2009–10	2591
2010–11	2506
ಒಟ್ಟು	**5127**

ಕಾಮಗಾರಿಗಳ ವಿವರನ್ನು ಅನುಬಂಧದಲ್ಲಿ ಲಗತ್ತಿಸಿದೆ.

ಆ) ಕಳೆದ ಮೂರು ವರ್ಷಗಳಲ್ಲಿ ಈ ಕಾಮಗಾರಿಗಳಿಗೆ ಬಿಡುಗಡೆಯಾದ ಅನುದಾನದ ವಿವರಗಳು ಈ ಮುಂದಿನಂತಿದೆ.

ವರ್ಷ	ಬಿಡುಗಡೆಯಾದ ಅನುದಾನ (ಲಕ್ಷಗಳಲ್ಲಿ)
2008–09	31.5
2009–10	234.25
2010–11	666.95
ಒಟ್ಟು	**932.7**

ಕಾಮಗಾರಿಗಳಿಗೆ ಒಟ್ಟಾರೆ ಅನುದಾನವನ್ನು ಪಂಚಾಯತ್ ರಾಜ್ ಸಂಸ್ಥೆಗಳಿಗೆ ಸಂದರ್ಭಕ್ಕೆ ಅನುಸಾರವಾಗಿ ಬಿಡುಗಡೆ ಮಾಡುತ್ತಿರುವುದರಿಂದ ಪ್ರತಿ ಕಾಮಗಾರಿಗೆ ಪ್ರತ್ಯೇಕವಾದ ಅನುದಾನವನ್ನು ನಿಗದಿ ಪಡಿಸಿರುವುದಿಲ್ಲ.

ಇ)

ವರ್ಷ	ಕಾಮಗಾರಿಗಳ ವಿವರ		
	ಪೂರ್ಣ	ಅಪೂರ್ಣ	ಒಟ್ಟು
2008–09	1	29	30
2009–10	543	2048	2591
2010–11	1369	1137	2506
ಒಟ್ಟು	**1913**	**3214**	**5127**

ಸದರಿ ಕಾಮಗಾರಿಗಳ ವಿವರಗಳನ್ನು ಪ್ರಶ್ನೆಯ "ಅ"ನಲ್ಲಿ ಒದಗಿಸಿರುವ ಅನುಬಂಧದಲ್ಲಿ ಇರುವಂತೆ.

ಈ) ಸದರಿ ಯೋಜನೆಯು ಒಂದು ಬೇಡಿಕೆಯ ಆಧಾರಿತ ಕಾರ್ಯಕ್ರಮವಾಗಿರುವುದರಿಂದ, ಕೆಲಸದ ಬೇಡಿಕೆಯನ್ನು ಆಧರಿಸಿ ಅನುದಾನವನ್ನು ಬಳಸಿಕೊಂಡು ಕಾಮಗಾರಿಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.

ಉ) ಸದರಿ ಯೋಜನೆಯು ಒಂದು ಬೇಡಿಕೆ ಆಧಾರಿತ ಕಾರ್ಯಕ್ರಮವಾಗಿರುವುದರಿಂದ ಜನರ ಬೇಡಿಕೆಯನ್ನು ಆಧರಿಸಿ ಅನುದಾನವನ್ನು ಬಳಸಲಾಗುತ್ತಿದೆ. ಯಾವುದೇ ಒಂದು ಆರ್ಥಿಕ ವರ್ಷದಲ್ಲಿ ಖರ್ಚಾಗದೇ ಉಳಿದಿರುವ ಹಣವನ್ನು ಮುಂದಿನ ಸಾಲಿಗೆ ಮುಂದುವರೆಸಿ ಬಳಸಲಾಗುವುದು.

ಬಂಟ್ವಾಳ ತಾಲ್ಲೂಕಿಗೆ ಪದವಿಪೂರ್ವ ಶಾಲೆ

93 (392) ಶ್ರೀ ಖಾದರ್ ಯು.ಟಿ. (ಮಂಗಳೂರು):– ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) 2010–11 ನೇ ಸಾಲಿಗೆ ಮತ್ತು 2011–12ನೇ ಸಾಲಿಗೆ ಸರ್ಕಾರಿ ಹಾಗೂ ಖಾಸಗಿ ಪದವಿ ಪೂರ್ವ ಕಾಲೇಜು ಹೊಸದಾಗಿ ಪ್ರಾರಂಭಿಸಲು ಅನುಮತಿ ಕೋರಿ ಬಂದಿರುವ ಪ್ರಸ್ತಾವನೆಗಳು ಎಷ್ಟು; (ವಿವರ ಒದಗಿಸುವುದು)

ಆ) ಈ ಪ್ರಸ್ತಾವನೆಗಳಲ್ಲಿ ಎಷ್ಟು ಹೊಸ ಕಾಲೇಜು ಸ್ಥಾಪನೆಗೆ ಅನುಮತಿ ನೀಡಲಾಗಿದೆ. ಉಳಿಕೆ ಇರುವ ಪ್ರಸ್ತಾವನೆಗಳು ಯಾವುವು;